# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **6(94)** |
| ಸದಸ್ಯರ ಹೆಸರು : | | ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರ ಕ್ಷೇತ್ರ) |
| ಉತ್ತರಿಸುವ ದಿನಾಂಕ : | | 11.08.2025 |
| ಉತ್ತರಿಸುವ ಸಚಿವರು: | | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಶೇ. 60% ಕ್ಕಿಂತ ಕಡಿಮೆ ಫಲಿತಾಂಶ ಪಡೆದಿರುವ ವಿಷಯ ಶಿಕ್ಷಕರಿಗೆ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವಂತೆ ಮತ್ತು ನಿರಂತರ 3 ವರ್ಷ ಶೇ. 60% ಕ್ಕಿಂತ ಕಡಿಮೆ ಫಲಿತಾಂಶ ನೀಡಿದಂತಹ ವಿಷಯ ಶಿಕ್ಷಕರ ವೇತನ ಅನುದಾನ ತಡೆ ಹಿಡಿಯುವ ಮುಂತಾದ ಕ್ರಮಗಳನ್ನು ಜರುಗಿಸಲು ನಿರ್ದೇಶಕರು ಪ್ರೌಢ ಶಿಕ್ಷಣ ಇವರು ಎಲ್ಲಾ ಉಪನಿರ್ದೇಶಕರಿಗೆ ನಿರ್ದೇಶನ ನೀಡಿರುವುದು ನಿಜವೇ? | ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿನ ಶಿಕ್ಷಕರ ಹುದ್ದೆಗಳ ಕುರಿತು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್‌ಇಪಿ 2017 ದಿನಾಂಕ: 06.03.2019 ರಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದೆ.<br><br>1. ಈಗಾಗಲೇ ಅನುದಾನಕ್ಕೆ ಒಳಪಟ್ಟಿರುವ ಶಾಲೆಯ ವಿಷಯವಾರು ಫಲಿತಾಂಶವನ್ನು ಪರಿಗಣಿಸಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶವನ್ನು ಪಡೆದಿರುವ ವಿಷಯ ಶಿಕ್ಷಕರನ್ನು ಗುರುತಿಸಿ ಅಂತಹವರ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು.<br><br>2. ಅನುದಾನಪ ಡೆಯುತ್ತಿರುವ ವಿಷಯ ಶಿಕ್ಷಕರು ನಿರಂತರ ಮೂರು ವರ್ಷಗಳಲ್ಲಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶ ನೀಡಿದಲ್ಲಿ ಅಂತಹ ವಿಷಯ ಶಿಕ್ಷಕರ ವೇತನಾನುದಾನವನ್ನು ತಡೆಹಿಡಿಯುವುದು.<br><br>3. ಒಂದು ಅನುದಾನಿತ ಪ್ರೌಢಶಾಲೆಯು ಸತತ ಐದು ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಲ್ಲಿ ಐದುವರ್ಷಗಳು ನಿರಂತರವಾಗಿ ಕನಿಷ್ಠ ಶೇ. 50 ವಿದ್ಯಾರ್ಥಿಗಳು ಉತ್ತೀರ್ಣರಾಗದಿದ್ದಲ್ಲಿ ಶಾಲೆಗೆ ನೀಡಲಾಗುತ್ತಿರುವ ವೇತನಾನುದಾನವನ್ನು ತಡೆಹಿಡಿಯುವುದು.<br><br>4. ಖಾಲಿ ಹುದ್ದೆಗೆ ಎದುರಾದ ಅನುದಾನಕ್ಕೆ ಒಳಪಡುವ ವಿಷಯ ಶಿಕ್ಷಕರ ಸಂಬಂಧಪಟ್ಟ ವಿಷಯದಲ್ಲಿ ಶೇ. 60ಕ್ಕಿಂತ ಕಡಿಮೆ ಫಲಿತಾಂಶ ಬಂದಲ್ಲಿ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು. ನಿರಂತರವಾಗಿ ಮೂರು ವರ್ಷಗಳು ವಿಫಲವಾದಲ್ಲಿ ಅವರ ವೇತನಾನುದಾನವನ್ನು ಹಿಂಪಡೆಯುವುದು.<br><br>ಸದರಿ ಆದೇಶದಂತೆ 2024-25ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯ ಫಲಿತಾಂಶವನ್ನು ಪರಿಶೀಲಿಸಿ ಸಂಬಂಧ ಪಟ್ಟ ಶಾಲೆಗಳನ್ನು ಮತ್ತು ಶಿಕ್ಷಕರುಗಳನ್ನು ಗುರುತಿಸಿ ಶಾಲೆಗಳಲ್ಲಿನ ವಿದ್ಯಾರ್ಥಿಗಳ ಕಲಿಕೆಯ ಮಟ್ಟ ಸುಧಾರಣೆ ಹಾಗೂ ಫಲಿತಾಂಶ ಸುಧಾರಣೆ ಕೈಗೊಳ್ಳುವ ನಿಟ್ಟಿನಲ್ಲಿ ಅವರ ನಿರ್ಧಿಷ್ಟ ಪಾತ್ರವಿದ್ದಲ್ಲಿ ಆಯುಕ್ತರ ಹಂತದಿಂದ ಕ್ರಮವಹಿಸಲು ತಿಳಿಸಲಾಗಿದೆ. |

| | | |
|---|---|---|
| | | ತದನಂತರ ಆಯಕ್ತರು, ಶಾಲಾ ಶಿಕ್ಷಣ ಇಲಾಖೆ ದಿನಾಂಕ:30/05/2025, ದಿನಾಂಕ:02/06/2025 ಹಾಗೂ ದಿನಾಂಕ:05/06/2025 ರ ಪತ್ರಗಳಲ್ಲಿನ ಅಂಶಗಳ ಕುರಿತು ಮೊದಲನೇ ಹಂತದಲ್ಲಿ ಸದರಿ ಶಾಲೆಗಳು ಮತ್ತು ಶಿಕ್ಷಕರುಗಳು ನೀಡಿದ ವಿವರಣೆಗಳನ್ನು ಮಾತ್ರ ಕ್ರೋಢೀಕರಿಸಿ ವರದಿ ಸಲ್ಲಿಸಲು ತಿಳಿಸಲಾಗಿದೆ. ಹಾಗೂ ವರದಿ ಸ್ವೀಕೃತವಾದ ನಂತರ ನೀಡುವ ಸೂಚನೆಗಳಂತೆ ಕ್ರಮವಹಿಸಲು ತಿಳಿಸಲಾಗಿದೆ. |
| ಆ) | ಶೇ. 60% ಕ್ಕಿಂತ ಕಡಿಮೆ ಫಲಿತಾಂಶ ಪಡೆದಿರುವ ವಿಷಯ ಶಿಕ್ಷಕರಿಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗಿದೆಯೇ; | ಶೇಕಡ 60 ಕ್ಕಿಂತ ಕಡಿಮೆ ಫಲಿತಾಂಶ ಪಡೆದಿರುವ ಆಯಾ ವಿಷಯ ಶಿಕ್ಷಕರುಗಳ ಮೇಲೆ ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್ಇಪಿ 2017 ದಿನಾಂಕ: 06.03.2019 ರನ್ವಯ ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳಲು ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ತಿಳಿಸಲಾಗಿದೆ. |
| ಇ) | ವಿಷಯವಾರು ಫಲಿತಾಂಶ ಶೇ. 60% ಕಡಿಮೆ ಆಗಿರಬಾರದು ಎಂಬ ನಿಯಮವನ್ನು ಕೇವಲ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಮಾತ್ರ ಅನ್ವಯಿಸಲಾಗಿದೆಯೇ;<br>(ವಿವರಣೆನೀಡುವುದು). | ವಿಷಯವಾರು ಫಲಿತಾಂಶ ಶೇ.60% ಕ್ಕಿಂತ ಕಡಿಮೆ ಆಗಿರಬಾರದು ಎಂಬ ನಿಯಮವು ಖಾಸಗಿ ಅನುದಾನಿತ ಶಾಲೆಗಳಿಗೆ ಅನ್ವಯಿಸಿರುವಂತೆ ಸರ್ಕಾರಿ ಶಾಲೆಗಳಿಗೂ ಅನ್ವಯಿಸಲಾಗಿರುತ್ತದೆ.<br><br>ಸರ್ಕಾರಿ ಶಾಲೆಗಳಲ್ಲಿ ಶೇಕಡಾ 60% ಕ್ಕಿಂತ ಫಲಿತಾಂಶ ಕಡಿಮೆ ಬಂದಿರುವ ಶಾಲೆಗಳು, ಮುಖ್ಯ ಶಿಕ್ಷಕರು ಮತ್ತು ಶಿಕ್ಷಕರುಗಳ ಕುರಿತು ಕ್ರಮವಹಿಸಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ಹಂತದಲ್ಲಿ ಕಾರಣ ಕೇಳಿ ನೋಟೀಸ್ ನೀಡಲಾಗಿರುತ್ತದೆ. |
| ಈ) | ಪ್ರತೀ ವಿಷಯದಲ್ಲಿ ಶೇ. 60% ಫಲಿತಾಂಶ ಆಗಿರಬೇಕು ಎಂಬ ನಿರ್ಧಾರವನ್ನು ಯಾವ ಆಧಾರದ ಮೇಲೆ ಮಾಡಲಾಗಿದೆ; (ಮಾಹಿತಿ ನೀಡುವುದು) | ಪ್ರತಿ ವಿಷಯದಲ್ಲಿ ಶೇ.60% ಫಲಿತಾಂಶ ಇರಬೇಕು ಎಂಬುದನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್ಇಪಿ 2017 ದಿನಾಂಕ:06.03.2019 ರಲ್ಲಿ ನಿರ್ದಿಷ್ಟ ಪಡಿಸಲಾಗಿದೆ.<br><br>ಆದೇಶದ ಪ್ರತಿಯನ್ನು ಅನುಬಂಧ-1 ರಲ್ಲಿ ಒದಗಿಸಿದೆ. |
| ಉ) | ವಿಷಯವಾರು ಮತ್ತು ಒಟ್ಟಾರೆ ರಾಜ್ಯ ಮಟ್ಟದ ಫಲಿತಾಂಶ ಕುಸಿಯಲು ಮೂಲ ಕಾರಣಗಳೇನು; ಈ ಬಗ್ಗೆ ಸರ್ಕಾರವು ಅಧಿಕಾರಿಗಳ ಮಟ್ಟದಲ್ಲಿ ಮತ್ತು ಶಿಕ್ಷಣ ತಜ್ಞರ ಜೊತೆ ಚರ್ಚೆ ಹಾಗೂ ಚಿಂತನೆ ಮಾಡಿ ಸುಧಾರಣೆ ಮಾಡಲು ಮಾರ್ಗೋಪಾಯಗಳನ್ನು ಕಂಡು ಹಿಡಿದಿದೆಯೇ (ವಿವರಣೆ ನೀಡುವುದು)? | 2024-25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಗೆ ಸುತ್ತೋಲೆ ಸಂಖ್ಯೆ: ಇಪಿ 272 ಎಸ್ಎಲ್ಬಿ 2024 ದಿನಾಂಕ: 29.08.2024 ರಲ್ಲಿ 20 ಅಂಶಗಳ ಸೂಚನೆಗಳನ್ನು ನೀಡಿ ಅವುಗಳನ್ನು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ತಿಳಿಸಲಾಗಿರುತ್ತದೆ. ಅದರಂತೆ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಸಿರುತ್ತಾರೆ.<br><br>2024 ರ ನವಂಬರ್ ಮಾಹೆಯಿಂದ ಮೇಲಿಂದ ಮೇಲೆ ಉಪ ನಿರ್ದೇಶಕರು(ಆಡಳಿತ) ಹಾಗೂ ಉಪನಿರ್ದೇಶಕರು (ಅಭಿವೃದ್ಧಿ) ರವರೊಂದಿಗೆ ಎಸ್.ಎಸ್.ಎಲ್.ಸಿ ಗುಣಮಟ್ಟದ ಫಲಿತಾಂಶಕ್ಕೆ ಪ್ರಗತಿ ಪರಿಶೀಲನಾ ಸಭೆಗಳನ್ನು ಆಯೋಜಿಸಲಾಗಿರುತ್ತದೆ. |

ಈ ಮೇಲಿನ ಅಂಶಗಳಂತೆ ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶವನ್ನು ಸುಧಾರಣೆಗೊಳಿಸಲು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿನ ಒಟ್ಟಾರೆ ಫಲಿತಾಂಶ ಈ ಕೆಳಗಿನಂತೆ ಬಂದಿರುತ್ತದೆ.

| **ಶಾಲೆಯ ವಿಧ** | **ಶೇಕಡವಾರು ಫಲಿತಾಂಶ** |
|---|---|
| ಸರ್ಕಾರಿ | 62.7% |
| ಖಾಸಗಿ ಅನುದಾನಿತ | 58.97% |

**<u>2023-24ನೇ ಸಾಲಿನ ಹಾಗೂ 2024-25ನೇ ಸಾಲಿನ ಎಸ್.ಎಸ್.ಎಲ್.ಸಿ ಪ್ರಥಮ ಪರೀಕ್ಷೆಗಳ ತುಲನಾತ್ಮಕ ತಖ್ತೆ:</u>**

2023-2024 ನೇ ಸಾಲಿನಲ್ಲಿ ಪ್ರಪ್ರಥಮ ಬಾರಿಗೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿಗಳ ಮೂಲಕ ವೆಬ್ ಕ್ಯಾಸ್ಟಿಂಗ್ ಮಾಡುವ ಹೊಸ ಪದ್ಧತಿಯನ್ನು ಪರಿಚಯಿಸಲಾಗಿತ್ತು. ಪರೀಕ್ಷಾ ಕೊಠಡಿಗಳ ದೃಶ್ಯಾವಳಿಗಳನ್ನು ಮೇಲ್ವಿಚಾರಣೆ ಮಾಡಲು ಎಲ್ಲಾ ಜಿಲ್ಲೆಗಳಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿತ್ತು. ಈ ನಾವೀನ್ಯ ಕ್ರಮವು ವಿನೂತನವಾಗಿದ್ದು, ಪರೀಕ್ಷೆಯ ಸಮಗ್ರತೆಯನ್ನು ಪುನರ್ ಸ್ಥಾಪಿಸಲು ಸಹಾಯಕವಾಗಿದೆ. ಈ ಮೂಲಕ ಪರೀಕ್ಷಾ ಅಕ್ರಮಗಳನ್ನು ಆಶ್ರಯಿಸದೆ ಪರೀಕ್ಷೆಗಳನ್ನು ಬರೆಯುವ ಅಭ್ಯಾಸವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವಲ್ಲಿ ಸಫಲವಾಗಿದ್ದು, ಈ ಕ್ರಮವನ್ನು ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪೋಷಕರನ್ನೊಳಗೊಂಡಂತೆ ಎಲ್ಲಾ ಭಾಗೀದಾರರು ಸ್ವಾಗತಿಸಿದ್ದಾರೆ.

ಆದರೆ, ಒಟ್ಟಾರೆ ಫಲಿತಾಂಶ ಕಳೆದ ವರ್ಷಕ್ಕಿಂತ [2022-23] ಶೇ. 30 ರಷ್ಟು ಕಡಿಮೆಯಾಗಿತ್ತು. ಮೊದಲ ಬಾರಿಗೆ ವೆಬ್ ಕ್ಯಾಸ್ಟಿಂಗ್ ವಿಧಾನವನ್ನು ಪರಿಚಯಿಸಿದ್ದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 20% ಗ್ರೇಸ್ ಅಂಕಗಳನ್ನು ನೀಡಲು ಸರ್ಕಾರ ನಿರ್ಧರಿಸಿತ್ತು. ಹಾಗೂ ಮುಂಬರುವ ವರ್ಷದಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ನೂತನ ವ್ಯವಸ್ಥೆಗೆ ಉತ್ತಮವಾಗಿ ಹೊಂದಿಕೊಳ್ಳುವುದರಿಂದ ಕೃಪಾಂಕ ನೀಡುವ ಅವಶ್ಯಕತೆ ಇರುವುದಿಲ್ಲ ಎಂದು ನಿರ್ಧರಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಒಂದು ಬಾರಿಯ ಕ್ರಮವಾಗಿ, 2024ರ ಎಲ್ಲಾ 3 ಎಸ್ಎಸ್ಎಲ್ಸಿ ಪರೀಕ್ಷೆಗಳಿಗೆ ಎಲ್ಲಾ ವಿಷಯಗಳಲ್ಲಿ ನೀಡುವ ಕೃಪಾಂಕಗಳನ್ನು ಆಕರ್ಷಿಸಲು ಪಡೆಯಬೇಕಾದ ಅರ್ಹ ಅಂಕಗಳನ್ನು ಶೇ. 35 ರಿಂದ ಶೇ. 25ಕ್ಕೆ ಇಳಿಸಲಾಗಿದೆ ಮತ್ತು

| | | |
|---|---|---|
| | | ಕೃಪಾಂಕದ ಪ್ರಮಾಣವನ್ನು ಶೇ. 10 ರಿಂದ ಶೇ. 20ಕ್ಕೆ ಹೆಚ್ಚಿಸಲಾಗಿತ್ತು.<br>ಈ ಕ್ರಮದ ನಂತರ ಒಟ್ಟಾರೆ ಫಲಿತಾಂಶವು ಈ ಕೆಳಗಿನ ಕೋಷ್ಟಕದಂತಿರುತ್ತದೆ.<br>**2023-24 ನೇ ಸಾಲಿನ ಪರೀಕ್ಷೆ-1 ರ ಫಲಿತಾಂಶ 20% ಗ್ರೇಸ್ ಅಂಕಗಳನ್ನೊಳಗೊಂಡಂತೆ** |

| 2024 SSLC EXAM 1 RESULT STATISTICS (CCERF, 20% GRACE PASSED) | | | |
|---|---|---|---|
| GOVT | AIDED | UN-AIDED | TOTAL |
| 72.58 % | 72.34 % | 86.57 % | 77.03 % |

**2023-24 ನೇ ಸಾಲಿನಲ್ಲಿಯೂ ಕೇವಲ ಶೇಕಡ 10% ಕೃಪಾಂಕ ನೀಡಿದ್ದಲ್ಲಿ ಫಲಿತಾಂಶ ಈ ಕೆಳಗಿನಂತೆ ಇರುತ್ತಿತ್ತು. ಇದನ್ನು 2024-25ನೇ ಸಾಲಿನ ಫಲಿತಾಂಶಕ್ಕೆ ಹೋಲಿಸಿದಲ್ಲಿ ಈ ಕೆಳಗಿನ ಹೆಚ್ಚಳವನ್ನು ಕಾಣಬಹುದು.**

**2023-24 ನೇ ಸಾಲಿನ ಪರೀಕ್ಷೆ-1 ರ ಫಲಿತಾಂಶ (10 % ಗ್ರೇಸ್ ಅಂಕಗಳಂತೆ)**

| 2023-24 SSLC EXAM 1 RESULT STATISTICS (CCERF, 10% GRACE PASSED) | | | | |
|---|---|---|---|---|
| YEAR | GOVT | AIDED | UN-AIDED | TOTAL |
| 2023-24 | 53.3 % | 52.67 % | 72.9 % | 59.45 % |

**2024-25 ನೇ ಸಾಲಿನ ಪರೀಕ್ಷೆ-1 ರ ಫಲಿತಾಂಶ (ಪ್ರತಿ ವರ್ಷ ನೀಡಲಾದ 10% ಗ್ರೇಸ್ ಅಂಕಗಳಂತೆ)**

| 2024-25 ನೇ ಸಾಲಿನ ಪರೀಕ್ಷ-1 ಫಲಿತಾಂಶ (10% ಗ್ರೇಸ್ ಅಂಕಗಳಂತೆ) | | | | |
|---|---|---|---|---|
| SSLC 2025 SCHOOL MANAGEMENT TYPE WISE RESULT [REGULAR FRESHER] | | | | |
| YEAR | GOVT | AIDED | UN-AIDED | ALL |
| 2024-25 | 62.7 % | 58.97 % | 75.59 % | 66.14 % |

**2023-24 (10% ಗ್ರೇಸ್) ಮತ್ತು 2024-25 ನೇ ಸಾಲಿನ (10% ಗ್ರೆಸ್) ಫಲಿತಾಂಶದಲ್ಲಿ ವ್ಯತ್ಯಾಸ**

| SSLC 2024 & 2025 EXAM 1 SCHOOL MANAGEMENT TYPE WISE RESULT DIFFERENCE [REGULAR FRESHER, 10% grace] | | | | |
|---|---|---|---|---|
| YEAR | GOVT | AIDED | UN-AIDED | TOTAL |
| 2023-24 | 53.30% | 52.67% | 72.90% | 59.45% |
| 2024-25 | 62.70% | 58.97% | 75.59% | 66.14% |
| DIFFERENCE | 9.4 | 6.3 | 2.69 | 6.69 |

**ಈ ಮೇಲಿನಂತೆ 2023-24 ನೇ ಸಾಲಿನ ಪರೀಕ್ಷೆ-1 (10% ಗ್ರೇಸ್)**

ಗಿಂತ 2024-25 ನೇ ಸಾಲಿನ ಪರೀಕ್ಷೆ-1 (10% ಗ್ರೇಸ್) ಫಲಿತಾಂಶದಲ್ಲಿ ಒಟ್ಟಾರೆ 6.69% ಹೆಚ್ಚಳ ಆಗಿರುವುದು ಕಂಡು ಬರುತ್ತಿದೆ.

**2024-25ನೇ ಸಾಲಿನ 3 ಪರೀಕ್ಷೆಗಳ ಒಟ್ಟಾರೆ ಫಲಿತಾಂಶ**

| 2024-25 ನೇ ಸಾಲಿನ 3 ಪರೀಕ್ಷೆಗಳ ಒಟ್ಟಾರೆ ಫಲಿತಾಂಶ (10% ಗ್ರೇಸ್) | | | | |
|---|---|---|---|---|
| SSLC 2025 SCHOOL MANAGEMENT TYPE WISE RESULT [REGULAR FRESHER] | | | | |
| Exam | GOVT | AIDED | UN-AIDED | ALL |
| EXAM-1 | 62.7 | 58.97 | 75.59 | 66.14 |
| EXAM-2 | 36.65 | 19.75 | 32 | 30.39 |
| EXAM-3 | 19.33 | 20.53 | 25.75 | 21.18 |
| OVERALL | 77.06% | 74.87% | 87.37% | 79.97% |

**2025-26 ನೇ ಸಾಲಿನಲ್ಲಿ SSLC ಫಲಿತಾಂಶ ಸುಧಾರಣೆಗೆ ಕೈಗೊಳ್ಳಲಾಗುವ ಕ್ರಮಗಳು:**

- ಸರ್ಕಾರದ ಸುತ್ತೋಲೆ ಸಂಖ್ಯೆ: ಇಪಿ 215 ಎಸ್ಎಲ್‌ಬಿ 2025 ದಿನಾಂಕ: 01.07.2025 ರಲ್ಲಿ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯ ಫಲಿತಾಂಶ ವೃದ್ಧಿಗಾಗಿ ಅನುಸರಿಸಬೇಕಾದ ಕ್ರಮಗಳ ಕುರಿತು 29 ಅಂಶಗಳ ಸೂಚನೆ ಜಾರಿಯಲ್ಲಿದ್ದು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

- 2024-25ನೇ ಸಾಲಿನಲ್ಲಿ ಪ್ರಕಟವಾಗಿರುವ ಫಲಿತಾಂಶವನ್ನು ಪರೀಕ್ಷಾ ಮಂಡಳಿ ಮತ್ತು ಡಿ.ಎಸ್.ಇ.ಆರ್.ಟಿ.ಯಿಂದ ವಿಶ್ಲೇಷಿಸಿ ಒಟ್ಟಾರೆಯಾಗಿ ಯಾವ ವಿಷಯದಲ್ಲಿ ಮತ್ತು ಆ ವಿಷಯಗಳ ಯಾವ ನಿರ್ದಿಷ್ಟ ಕಲಿಕಾಂಶಗಳಲ್ಲಿ ಕಡಿಮೆ ಸಾಧನೆ ಆಗಿದೆ ಎಂಬುದನ್ನು ಕಂಡು ಹಿಡಿದು, ಆ ನಿರ್ದಿಷ್ಟ ಕಲಿಕಾಂಶಗಳ ಬೋಧನೆ / ಕಲಿಕೆಗಳ ಕುರಿತು ಅವಶ್ಯ ಕ್ರಮವಹಿಸಲಾಗುವುದು.

- ಪ್ರಸ್ತುತ ವರ್ಷ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಸುತ್ತೋಲೆ ಸಂಖ್ಯೆ:E—59908 DSERT/EVG/ಪಾ.ಅ.ಮೌ(LBA)/2025-26 ದಿನಾಂಕ: 16.7.2025 ರಲ್ಲಿ ಶಾಲೆಗಳಲ್ಲಿ ಡಿ.ಎಸ್.ಇ.ಆರ್.ಟಿ.

| | | |
|---|---|---|
| | | ವತಿಯಿಂದ ಅಧ್ಯಾಯ ಆಧಾರಿತ ಮೌಲ್ಯಾಂಕನ (Lesson Based Assessment) ಕೈಗೊಳ್ಳಲಾಗುವುದು. ಇದರಿಂದ ಯಾವುದೇ ವಿದ್ಯಾರ್ಥಿಗಳು ಆಯಾ ಪಾಠದಲ್ಲಿನ ಕಲಿಕಾಂಶಗಳನ್ನು ಪಡೆದುಕೊಳ್ಳದೇ ಇದ್ದಲ್ಲಿ, ಆ ಕಲಿಕಾಂಶಗಳನ್ನು ಅದೇ ಸಂದರ್ಭದಲ್ಲಿ ಕಲಿಯಲು ಶಿಕ್ಷಕರು ಪರಿಹಾರಾತ್ಮಕ ಕ್ರಮಗಳನ್ನು ಕೈಗೊಂಡು ಮುಂದೆ ಸಾಗಲು ತಿಳಿಸಲಾಗುವುದು.<br>• ಸೇತುಬಂಧ ಮೌಲ್ಯಮಾಪನ ಆಧಾರದ ಮೇಲೆ ಗುರುತಿಸಲ್ಪಟ್ಟ ವಿದ್ಯಾರ್ಥಿಗಳಿಗೆ ವಿಶೇಷ ಬೋಧನಾ ತರಗತಿಗಳನ್ನು ನಡೆಸಲಾಗುತ್ತಿದೆ.<br>• ಕ್ಲಿಷ್ಟ ಪರಿಕಲ್ಪನೆಗಳನ್ನು ಗುರುತಿಸಿ ವಿದ್ಯಾರ್ಥಿಗಳ ಕಲಿಕೆಯನ್ನು ಅನುಕೂಲಿಸಲು ಶಾಲೆಯ ಅವಧಿಯ ಮೊದಲು ಮತ್ತು ಶಾಲಾ ಅವಧಿಯ ನಂತರ ಶಾಲೆಯಲ್ಲಿಯೇ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ.<br>• ಆಯಾ ತರಗತಿ ನಿರ್ದಿಷ್ಟ ಕಲಿಕಾ ಫಲಗಳನ್ನು ವಿದ್ಯಾರ್ಥಿಗಳು ಸಾಧಿಸುವಂತಾಗಲು ಒಂದನೇ ತರಗತಿಯಿಂದಲೇ ವಿದ್ಯಾರ್ಥಿಗಳ ಕಲಿಕೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ.<br>• ಫಲಿತಾಂಶವನ್ನು ಉತ್ತಮಪಡಿಸಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಶಿಕ್ಷಕರಿಗೆ ಶಾಲಾ ದಿನಗಳನ್ನು ಹೊರತು ಪಡಿಸಿ ಪುನಶ್ಚೇತನಾ ತರಬೇತಿಗಳನ್ನು ಆಯೋಜಿಸಲಾಗುವುದು.<br>• ಗುಣಮಟ್ಟದ ಫಲಿತಾಂಶ ಪಡೆಯಲು ವಿವಿಧ ಹಂತಗಳಲ್ಲಿ ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನಾ ಸಭೆಯನ್ನು ಆಯೋಜಿಸಿ ಕ್ರಮ ವಹಿಸಲಾಗುವುದು.. |

**ಸಂಖ್ಯೆ: ಇಪಿ 235 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ, ಸೂಕ್ತ ಪ್ರಾಧಿಕಾರದ ಅನುಮೋದನೆ ಪಡೆದು ಬಡ್ತಿ ಹೊಂದಿರುವ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿಮಾಡಲು ಅನುಮತಿ ನೀಡುವ ಕುರಿತು.

*****

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್ಇಪಿ 2017, ದಿನಾಂಕ: 29.06.2017
2. ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್ಇಪಿ 2017, ದಿನಾಂಕ: 25.09.2018

*****

ಪ್ರಸ್ತಾವನೆ:-

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅನುದಾನಿತ ಖಾಸಗಿ ಪ್ರೌಢಶಾಲೆಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣದಿಂದ ಖಾಲಿಯಾದ ಹುದ್ದೆಗಳನ್ನು ಹಾಗೂ ಸೂಕ್ತ ಪ್ರಾಧಿಕಾರದ ಅನುಮೋದನೆ ಪಡೆದು ಬಡ್ತಿ ಹೊಂದಿರುವ ಹಾಗೂ ಇತರೆ ಕಾರಣಗಳಿಂದ ದಿನಾಂಕ: 31.12.2012ರವರೆಗೆ ಖಾಲಿಯಾದ ಹುದ್ದೆಗಳನ್ನು ಹೆಚ್ಚುವರಿ ಪ್ರಕ್ರಿಯೆಯಲ್ಲಿ ಬಳಸಿಕೊಂಡ ನಂತರ ಬಾಕಿ ಉಳಿದ ಬೋಧಕ ಹುದ್ದೆಗಳನ್ನು ಹಾಗೂ ದಿನಾಂಕ: 01.01.2013 ರಿಂದ 31.12.2014ರವರೆಗೆ ಮತ್ತು ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಆದೇಶದಲ್ಲಿ ದಿನಾಂಕ: 01.01.2015 ರಿಂದ 31.12.2015ರವರೆಗೆ ಖಾಲಿಯಾದ ಬೋಧಕ ಹುದ್ದೆಗಳನ್ನು ಹೆಚ್ಚುವರಿ ಪ್ರಕ್ರಿಯೆಯಲ್ಲಿ ಬಳಸಿಕೊಂಡ ನಂತರ ಬಾಕಿ ಉಳಿದ ಬೋಧಕ ಹುದ್ದೆಗಳನ್ನು (ವೃತ್ತಿ/ಚಿತ್ರಕಲಾ/ಸಂಗೀತ ಮುಂತಾದ ವಿಶೇಷ ಶಿಕ್ಷಕರನ್ನು ಹೊರತುಪಡಿಸಿ) ಭರ್ತಿ ಮಾಡಿಕೊಳ್ಳಲು ಕೆಲವು ಷರತ್ತುಗಳಿಗೊಳಪಟ್ಟು ಆರ್ಥಿಕ ಮಿತವ್ಯಯ ಸಡಿಲಿಸಿ ಅನುಮತಿ ನೀಡಲಾಗಿದೆ. ಸದರಿ ಷರತ್ತುಗಳಲ್ಲಿನ ಕ್ರಮ ಸಂಖ್ಯೆ (4)ರಲ್ಲಿ ಸಂಬಂಧಿಸಿದ ಅನುದಾನಿತ ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು (Regular Candidates only) ಕಳೆದ 5 ಶೈಕ್ಷಣಿಕ ವರ್ಷಗಳ ಜಿಲ್ಲಾ ಸರಾಸರಿ ಫಲಿತಾಂಶಕ್ಕಿಂತ ಉತ್ತಮವಾಗಿರಬೇಕು ಎಂಬ ಷರತ್ತನ್ನು ಇರುತ್ತದೆ.

ಮಾನ್ಯ ಸಭಾಪತಿಗಳು, ವಿಧಾನ ಪರಿಷತ್ತು ಮತ್ತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಉಪಸ್ಥಿತಿಯಲ್ಲಿ ದಿನಾಂಕ: 01.09.2018ರಂದು ನಡೆದ ಸಭೆಯಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ವಿಧಿಸಿರುವ ಫಲಿತಾಂಶದ ಷರತ್ತನ್ನು ಸಡಿಲಿಸಿ ಹುದ್ದೆ ಭರ್ತಿಯಾದ ಮೂರು ವರ್ಷದ ನಂತರ ಫಲಿತಾಂಶ ಸುಧಾರಣೆಯಾಗಿದಿದ್ದಲ್ಲಿ ಅನುದಾನ ತಡೆಹಿಡಿಯುವುದಕ್ಕೆ ಕ್ರಮ ಕೈಗೊಳ್ಳುವಂತೆ ಚರ್ಚಿಸಲಾಗಿರುತ್ತದೆ. ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ವಿಧಿಸಲಾಗಿರುವ ಫಲಿತಾಂಶದ ಷರತ್ತನ್ನು ಸಡಿಲಿಸುವಂತೆ ವಿವಿಧ ಶಿಕ್ಷಣ ಸಂಸ್ಥೆಗಳು, ಶಿಕ್ಷಣ ಕ್ಷೇತ್ರವನ್ನು ಪ್ರತಿನಿಧಿಸುವ ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳಿಂದಲೂ ಬೇಡಿಕೆ ಇರುತ್ತದೆ.

ಮಾನ್ಯ ಮುಖ್ಯಮಂತ್ರಿಗಳ ನಿರ್ದೇಶನದ ಮೇರೆಗೆ ಕರ್ನಾಟಕ ರಾಜ್ಯ ಅನುದಾನಿತ ಶಾಲಾ ಕಾಲೇಜು ಸಂಘ, ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಹಾಗೂ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಬೇಡಿಕೆಗಳ ಕುರಿತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:29.01.2019ರಂದು ಜರುಗಿದ ಸಭೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರು ಸಹ ಹಾಜರಿದ್ದು, ಅಂದು ಚರ್ಚಿಸಿ ನೀಡಿದ ಸಲಹೆಗಳನ್ನು ಪರಿಗಣಿಸಿದೆ.



Scanned with OKEN Scanner

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ, ಸೂಕ್ತ ಪ್ರಾಧಿಕಾರದ ಅನುಮೋದನೆ ಪಡೆದು ಬಡ್ತಿ ಹೊಂದಿರುವ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಅನುದಾನಿತ ಬೋಧಕ ಹುದ್ದೆಗಳನ್ನು ತುಂಬುವ ಸಂಬಂಧದಲ್ಲಿ ಆಗಿರುವ ಪ್ರಗತಿಯನ್ನು ಪರಿಶೀಲಿಸಲಾಗಿ ದಿನಾಂಕ: 31.12.2015ರವರೆಗೆ ವಿವಿದ ಕಾರಣಗಳಿಂದ ಖಾಲಿಯಾದ ಒಟ್ಟು 3633 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಅವುಗಳ ಪೈಕಿ ಸರ್ಕಾರವು ವಿಧಿಸಿದ ಷರತ್ತಿಗನುಗುಣವಾಗಿ 781 ಹುದ್ದೆಗಳನ್ನು ಭರ್ತಿ ಮಾಡಲಾಗಿರುತ್ತದೆ. ಸರ್ಕಾರವು ವಿಧಿಸಿರುವ ಷರತ್ತುಗಳಲ್ಲಿ ಒಂದಾದ ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು ಜಿಲ್ಲಾ ಸರಾಸರಿ ಫಲಿತಾಂಶಕ್ಕೆ ಸಮನಾಗಿ ಅಥವಾ ಹೆಚ್ಚಾಗಿರಬೇಕೆಂಬ ಷರತ್ತನ್ನು ಪೂರೈಸದ ಕಾರಣದಿಂದಾಗಿ ಬಹುತೇಕ ಖಾಲಿ ಹುದ್ದೆಗಳು ಭರ್ತಿಯಾಗದೆ ಉಳಿದಿವೆ. ಇದರಿಂದಾಗಿ ಸರ್ಕಾರವು ಅನುಮತಿ ನೀಡಿದ ಹುದ್ದೆಗಳಲ್ಲಿ ಶೇ.75ಕ್ಕಿಂತ ಹೆಚ್ಚಿನ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ. ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗಿದಿದ್ದಲ್ಲಿ, ಸದರಿ ಶಾಲೆಗಳ ಫಲಿತಾಂಶದ ಮೇಲೆ ಇನ್ನೂ ಹೆಚ್ಚಿನ ಋಣಾತ್ಮಕ ಪರಿಣಾಮವಾಗುವ ಸಂಭವವಿದೆ.

ಬೋಧನಾ ಗುಣಮಟ್ಟವನ್ನು ಕಾಪಾಡಲು ಸಹಾಯಕವಾಗುವಂತೆ, ಅನುದಾನಿತ ಪ್ರೌಢಶಾಲಾ ಶಿಕ್ಷಕರ ವಿಷಯುವಾರು ಫಲಿತಾಂಶದ ಶೇಕಡವಾರು ಫಲಿತಾಂಶದಲ್ಲಿ ಅಗತ್ಯ ಸುಧಾರಣಾ ಕ್ರಮಗಳನ್ನು ಕೈಗೊಳ್ಳಬಹುದಾದ ಷರತ್ತಿಗೆ ಒಳಪಟ್ಟು ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು ಜಿಲ್ಲಾ ಸರಾಸರಿ ಫಲಿತಾಂಶಕ್ಕೆ ಸಮನಾಗಿ ಅಥವಾ ಹೆಚ್ಚಾಗಿರಬೇಕೆಂಬ ಎಂಬ ಷರತ್ತನ್ನು ಸಡಿಲಿಸಲು ನಿರ್ಣಯಿಸಲಾಗಿದೆ.

ಮೇಲ್ಕಂಡ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಪ್ರಸ್ತುತ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 31.12.2015ರವರೆಗೆ ವಿವಿಧ ಕಾರಣಗಳಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತುತ ವಿಧಿಸಲಾಗಿರುವ ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು ಜಿಲ್ಲಾ ಸರಾಸರಿ ಫಲಿತಾಂಶಕ್ಕೆ ಸಮನಾಗಿ ಅಥವಾ ಹೆಚ್ಚಾಗಿರಬೇಕೆಂಬ ಷರತ್ತನ್ನು ಸಡಿಲಗೊಳಿಸುವ ಬಗ್ಗೆ ನಿರ್ಣಯಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಡಿ 14 ಎಸ್ಇಪಿ 2017,**

**ಬೆಂಗಳೂರು, ದಿನಾಂಕ : 06ನೇ ಮಾರ್ಚ್, 2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ವಾಸ್ತವಾಂಶ ಹಾಗೂ ಸಕಾರಣಗಳ ಹಿನ್ನೆಲೆಯಲ್ಲಿ, ಅನುದಾನಿತ ಪ್ರೌಢಶಾಲೆಗಳಲ್ಲಿ ವಿವಿಧ ಕಾರಣಗಳಿಂದ ದಿನಾಂಕ: 31.12.2015ರವರೆಗೆ ಖಾಲಿಯಾದ ಬೋಧಕ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ (ವೃತ್ತಿ/ಚಿತ್ರಕಲಾ/ಸಂಗೀತ ಮುಂತಾದ ವಿಶೇಷ ಶಿಕ್ಷಕರನ್ನು ಹೊರತುಪಡಿಸಿ) ಹುದ್ದೆಗಳನ್ನು ಭರ್ತಿಮಾಡಲು ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು ಜಿಲ್ಲಾ ಸರಾಸರಿ ಫಲಿತಾಂಶಕ್ಕೆ ಸಮನಾಗಿ ಅಥವಾ ಹೆಚ್ಚಾಗಿರಬೇಕೆಂಬ ಷರತ್ತನ್ನು ಸಡಿಲಗೊಳಿಸಿ, ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಕ್ಷಮ ಪ್ರಾಧಿಕಾರಿಗಳಿಗೆ ಅನುಮತಿ ನೀಡಿ ಆದೇಶಿಸಿದೆ

1) ಈಗಾಗಲೇ ಅನುದಾನಕ್ಕೊಳಪಟ್ಟಿರುವ ಶಾಲೆಯ ಒಟ್ಟಾರೆ ಫಲಿತಾಂಶದ ಬದಲು ವಿಷಯವಾರು ಫಲಿತಾಂಶವನ್ನು ಪರಿಗಣಿಸಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶವನ್ನು ಪಡೆದಿರುವ ವಿಷಯ ಶಿಕ್ಷಕರನ್ನು ಗುರುತಿಸಿ ಅಂತಹವರ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು;
2) ಅನುದಾನ ಪಡೆಯುತ್ತಿರುವ ವಿಷಯ ಶಿಕ್ಷಕರು ನಿರಂತರ ಮೂರು ವರ್ಷಗಳಲ್ಲಿ ಶೇ.60ಕ್ಕಿಂತ ಕಡಿಮೆ ಫಲಿತಾಂಶ ನೀಡಿದಲ್ಲಿ, ಅಂತಹ ವಿಷಯ ಶಿಕ್ಷಕರ ವೇತನಾನುದಾನವನ್ನು ತಡೆಹಿಡಿಯುವುದು;
3) ಒಂದು ಅನುದಾನಿತ ಪ್ರೌಢಶಾಲೆಯು ಸತತ ಐದು ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಲ್ಲಿ ಐದು ವರ್ಷಗಳು ನಿರಂತರವಾಗಿ ಕನಿಷ್ಠ ಶೇ.50 ವಿದ್ಯಾರ್ಥಿಗಳು ಉತ್ತೀರ್ಣರಾಗದಿದ್ದಲ್ಲಿ ಶಾಲೆಗೆ ನೀಡಲಾಗುತ್ತಿರುವ ವೇತನಾನುದಾನವನ್ನು ತಡೆಹಿಡಿಯುವುದು.



Scanned with OKEN Scanner

4) ಖಾಲಿ ಹುದ್ದೆಗೆ ಎದುರಾಗಿ ಅನುದಾನಕ್ಕೊಳಪಡುವ ವಿಷಯ ಶಿಕ್ಷಕರ ಸಂಬಂಧಪಟ್ಟ ವಿಷಯದಲ್ಲಿ ಶೇ.60ಕ್ಕಿಂತ ಕಡಿಮೆ ಫಲಿತಾಂಶ ಬಂದಲ್ಲಿ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು, ನಿರಂತರವಾಗಿ ಮೂರು ವರ್ಷಗಳು ವಿಫಲವಾದಲ್ಲಿ ಅವರ ವೇತನಾನುದಾನವನ್ನು ಹಿಂಪಡೆಯುವುದು;

5) ಮೇಲ್ಕಂಡ ಷರತ್ತುಗಳನ್ನು ಪೂರೈಸಿರುವ ಅಥವಾ ವಿಫಲವಾಗಿರುವ ಬಗ್ಗೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಪ್ರತಿ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಫಲಿತಾಂಶ ಪ್ರಕಟಗೊಂಡ ನಂತರ ಇದರ ಮೇಲುಸ್ತುವಾರಿ ಕ್ರಮವನ್ನು ಕಡ್ಡಾಯವಾಗಿ ಕೈಗೊಳ್ಳುವುದು ಹಾಗೂ ಸಕ್ಷಮ ಪ್ರಾಧಿಕಾರವಾದ ಆಯುಕ್ತರು/ಅಪರ ಆಯುಕ್ತರಿಗೆ ಅನುಸರಣಾ ವರದಿ ಸಲ್ಲಿಸುವುದು;

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್‌ಇಒ 2017, ದಿನಾಂಕ: 29.06.2017ರಲ್ಲಿನ ಉಳಿದ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Rajyashree V T
(ವಿ.ಟಿ.ರಾಜ್ಯಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ).

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ
6. ನಿರ್ದೇಶಕರು(ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ
8. ಜಿಲ್ಲಾ ಪಂಚಾಯಿತಿಗಳ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-8), ವಿಧಾನ ಸೌಧ, ಬೆಂಗಳೂರು.
11. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ-ಅಂತರ್ಜಾಲದಲ್ಲಿ ಅಪ್‌ಲೋಡ್ ಮಾಡಲು
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು



Scanned with OKEN Scanner